# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 958

2) ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸಬೇಕಾದ ದಿನಾಂಕ: : 17.12.2024

4) ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಂಕಣ ರೈಲ್ವೆ ಕಾರ್ಪೋರೇಷನ್‌ನಲ್ಲಿ ರಾಜ್ಯ ಸರ್ಕಾರ ಹೊಂದಿರುವ ಪಾಲೆಷ್ಟು; ಇದರಿಂದ ಪ್ರತಿ ವರ್ಷ ರಾಜ್ಯಕ್ಕೆ ಬರುತ್ತಿರುವ ಆದಾಯ ಎಷ್ಟು; ಈವರೆಗೆ ಬಂದಿರುವ ಆದಾಯ ಎಷ್ಟು; (ವರ್ಷವಾರು ವಿವರ ನೀಡುವುದು) | ಕೊಂಕಣ ರೈಲ್ವೇ ನಿಗಮ ನಿಯಮಿತದಲ್ಲಿ ಕರ್ನಾಟಕ ಸರ್ಕಾರವು ಶೇ.11.62 ರಷ್ಟು ಈಕ್ವಿಟಿ ಪಾಲನ್ನು ಹೊಂದಿದೆ. (ರೂ. 270,36,99,000/- ಮೊತ್ತದ ಇಕ್ವಿಟಿ ಷೇರುಗಳ ಸಂಖ್ಯೆ 27,03,699 ಇರುತ್ತದೆ).<br><br>ಕೊಂಕಣ ರೈಲ್ವೇ ನಿಗಮ ನಿಯಮಿತದ ರೂ.3,843.30 ಕೋಟಿಗಳ ಸಂಚಿತ ನಷ್ಟದಿಂದಾಗಿ ಕಂಪನಿ ಕಾಯಿದೆ, 2013 ರ ಸೆಕ್ಷನ್ 123 ರನ್ವಯ ರಾಜ್ಯಕ್ಕೆ ಇಲ್ಲಿಯವರೆಗೆ ಯಾವುದೇ ಲಾಭಾಂಶವನ್ನು ಪಾವತಿಸಿರುವುದಿಲ್ಲ. |
| ಆ) | ಕೇಂದ್ರ ಸರ್ಕಾರವು ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೆಯೊಂದಿಗೆ ವಿಲೀನಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಪ್ರಸ್ತಾವನೆಗೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆಯೇ; | ಕೊಂಕಣ ರೈಲ್ವೇ ನಿಗಮ ನಿಯಮಿತವು ಈಕ್ವಿಟಿ ಷೇರುಗಳನ್ನು ರೈಲ್ವೆ ಮಂತ್ರಾಲಯಕ್ಕೆ ಬಿಟ್ಟುಕೊಡುವ ಕುರಿತು ಪರಿಶೀಲಿಸುವಂತೆ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು "best exit option, valuation methodology " ಮತ್ತು ಇತರೆ ವಿವರಗಳನ್ನು ಕೊಂಕಣ ರೈಲ್ವೆ ನಿಗಮದಿಂದ ಪಡೆಯುವಂತೆ ನೀಡಿರುವ ಅಭಿಪ್ರಾಯದನ್ವಯ ಸೂಕ್ತ ಪ್ರಸ್ತಾವನೆ ಸಲ್ಲಿಸುವಂತೆ ಕೋರಲಾಗಿದ್ದು, ಕೊಂಕಣ ರೈಲ್ವೆ ನಿಗಮದಿಂದ ಪ್ರಸ್ತಾವನೆ ನಿರೀಕ್ಷಿಸಲಾಗಿದೆ. |
| ಇ) | ಒಪ್ಪಿಗೆ ನೀಡದಿದ್ದಲ್ಲಿ, ಕಾರಣಗಳೇನು; ಈ ಪ್ರಸ್ತಾವನೆ ಕುರಿತು ರಾಜ್ಯ ಸರ್ಕಾರದ ನಿಲುವೇನು? | ಉದ್ಭವಿಸುವುದಿಲ್ಲ. |

ಸಂಖ್ಯೆ: ಮೂಅಇ 292 ರಾರಾಹೆ 2024

(ಎಂ.ಬಿ.ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು